Akashvani : Bangalore
Regional Bulletin In Kannada
10.10.2025 / 6.40 pm
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ದೇಶದ ಬೆಳವಣಿಗೆಗೆ ಎಂಎಸ್‌ಎಂಇ ಕೊಡುಗೆ ಅನನ್ಯ ; ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ
- ಸ್ವಚ್ಛ-ಸುಂದರ ಬೆಂಗಳೂರು ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
- ಏಕಬಳಕೆ ಪ್ಲಾಸ್ಟಿಕ್ ಪರಿಸರಕ್ಕೆ ಮಾರಕ ; ಬಟ್ಟೆ ಕೈ ಚೀಲಕ್ಕೆ ಆದ್ಯತೆ ಅಗತ್ಯ - ಸಚಿವ ಈಶ್ವರ ಖಂಡ್ರೆ
- ಕೃಷ್ಣಾ ಮೇಲ್ದಂಡೆ ಯೋಜನೆಯ ೩ನೇ ಹಂತದ ಭೂಸ್ವಾಧೀನಕ್ಕೆ ಪರಿಹಾರ ದರ ನಿಗದಿ

****************

ಕೇಂದ್ರ ಸರ್ಕಾರದ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಬೆಂಗಳೂರಿನಲ್ಲಿಂದು ಎನ್.ಎಸ್.ಐ.ಸಿ. ಹಾಗೂ ಕಾಸಿಯಾದಿಂದ ಆಯೋಜಿಸಲಾಗಿದ್ದ ಎಂ.ಎಸ್.ಎಂ.ಇ ಮಾರುಕಟ್ಟೆ ಸಮಾವೇಶಕ್ಕೆ ಚಾಲನೆ ನೀಡಿದರು.ಬಳಿಕ ಮಾತನಾಡಿದ ಸಚಿವರು, ದೇಶದ ಒಟ್ಟು ಉತ್ಪಾದನಾ ಪ್ರಮಾಣ ಹಾಗೂ ರಫ್ತುವಿಗೆ ಎಂ.ಎಸ್.ಎಂ.ಇ. ಕ್ಷೇತ್ರ ಶೇಕಡ ೪೦ರಷ್ಟು ಕೊಡುಗೆ ನೀಡುತ್ತಿದೆ. ಕೃಷಿ, ಆಹಾರ, ರಕ್ಷಣೆ, ಬಾಹ್ಯಾಕಾಶ, ಕೃತಕ ಬುದ್ಧಿಮತ್ತೆ ಹೀಗೆ ಎಲ್ಲಾ ಕ್ಷೇತ್ರಗಳಿಗೂ ತನ್ನದೇ ಆದ ಮಹತ್ತರ ಕೊಡುಗೆ ನೀಡುತ್ತಾ ಬಂದಿದೆ ಎಂದು ತಿಳಿಸಿದರು. ದೇಶದ ಅಭಿವೃದ್ಧಿಯಲ್ಲಿ ಕೈಗಾರಿಕೆಗಳ ಪಾತ್ರ ಹಿರಿದಾಗಿದೆ. ಅದರಲ್ಲೂ ವಿಶೇಷವಾಗಿ ಎಂ.ಎಸ್.ಎಂ.ಇ.ಗಳು ರಾಷ್ಟ್ರದ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡುತ್ತಿವೆ. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಮೊದಲ ಬಾರಿಗೆ ಕೌಶಲ್ಯ ತರಬೇತಿ ವಿಭಾಗವನ್ನು ಆರಂಭಿಸಿತು. ಮಹಿಳೆಯರು, ಯುವಕರಿಗೆ ಜಾಗತಿಕ ಮಟ್ಟದ ಬೇಡಿಕೆಗೆ ಅನುಸಾರವಾಗಿ ತರಬೇತಿ ಕಾರ್ಯಕ್ರಮಗಳು ಹಾಗೂ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು. ೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಾಣದ ಸಂಕಲ್ಪವನ್ನು ಹೊಂದಲಾಗಿದ್ದು,

ಎಂ.ಎಸ್.ಎಂ.ಇ ಕ್ಷೇತ್ರದ ಕೊಡುಗೆ ಅಪಾರವಾಗಿದೆ. ಸ್ವಾವಲಂಬಿ ಭಾರತವನ್ನಾಗಿ ರೂಪಿಸಲು ಪ್ರತಿಯೊಬ್ಬರ ಕೊಡುಗೆ ಅನನ್ಯ. ಸ್ವದೇಶಿ ಮನೋಭಾವವನ್ನು ರೂಡಿಸಿಕೊಂಡು ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ತಿಳಿಸಿದರು. ಅತಿ ಹೆಚ್ಚು ಸಾವಯವ ಆಹಾರ ಉತ್ಪನ್ನಗಳನ್ನು ತಯಾರಿಸುವುದರಿಂದ ಆರೋಗ್ಯಕರ ಸಮಾಜವನ್ನು ನಿರ್ಮಿಸಲು ಸಾಧ್ಯ. ಬೆಂಗಳೂರಿನ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಜಾಗತಿಕ ಮಟ್ಟದ ತರಬೇತಿ ನೀಡುವ ಕೇಂದ್ರವನ್ನು ಆರಂಭಿಸಲಾಗುವುದು ಎಂದರು. ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುತ್ತಿರುವ ಹಲವು ಬ್ಯಾಂಕ್ ಗಳು ಹಾಗೂ ಕೈಗಾರಿಕಾ ಸಂಸ್ಥೆಗಳನ್ನು ಕಾರ್ಯಕ್ರಮದಲ್ಲಿ ಅಭಿನಂದಿಸಲಾಯಿತು.

****************

ಅತಿ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಸಮಸ್ತ ಜನರಿಗೆ ಸುಗಮ ಆಡಳಿತ, ಸಮರ್ಪಕ ಅಭಿವೃದ್ಧಿಗಾಗಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಅಸ್ತಿತ್ವಕ್ಕೆ ಬಂದು ಐದು ಪಾಲಿಕೆಗಳು ರಚನೆಯಾಗಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೊದಲ ಸಭೆಯಲ್ಲಿ ಮಾತನಾಡಿದ ಅವರು, ಬೆಂಗಳೂರಿನ ಜನಸಂಖ್ಯೆ ೧ ಕೋಟಿ ೪೦ ಲಕ್ಷಕ್ಕೆ ತಲುಪಿದೆ. ಸುಗಮ ಕಸ ವಿಲೇವಾರಿ, ಪಾಲಿಕೆಗಳ ಆದಾಯ ಹೆಚ್ಚಳ, ಸಂಚಾರ ದಟ್ಟಣೆ ನಿವಾರಣೆಯಾಗಬೇಕು. ಸ್ವಚ್ಛ-ಸುಂದರ ಬೆಂಗಳೂರು ನಿರ್ಮಾಣದ ಜೊತೆಗೆ ರಸ್ತೆ, ಚರಂಡಿ, ಪಾದಚಾರಿ ಮಾರ್ಗಗಳು, ಪಾರ್ಕ್‌ಗಳ ನಿರ್ಮಾಣಕ್ಕೆ ಆದ್ಯತೆ ನೀಡಿ ಮಾದರಿ ಪಾಲಿಕೆಗಳನ್ನಾಗಿ ರೂಪಿಸಬೇಕು ಎಂದರು.

****************

ಜಲ, ವಾಯು, ಶಬ್ದ ಮಾಲಿನ್ಯ ಹೆಚ್ಚುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ, ಪರಿಸರ ಸಂರಕ್ಷಿಸಲು ಮಾಲಿನ್ಯ ನಿಯಂತ್ರಣ ಮಂಡಳಿ ಜಲ ಮತ್ತು ವಾಯು ಕಾಯಿದೆಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ. ಬಳ್ಳಾರಿಯಲ್ಲಿಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಕೈಗಾರಿಕೆಗಳ ರಾಸಾಯನಿಕ ತ್ಯಾಜ್ಯ, ಬಹುಮಹಡಿ ಕಟ್ಟಡಗಳ

ಸಂಸ್ಕರಿಸದ ಮಲತ್ಯಾಜ್ಯ ಕೆರೆ, ಕಟ್ಟೆ, ನದಿ, ಸರೋವರ ಸೇರುತ್ತಿದ್ದು, ಇದರಿಂದ ಜಲಚರಗಳಷ್ಟೇ ಅಲ್ಲದೆ ಜನ, ಜಾನುವಾರುಗಳೂ ಮೃತಪಡುತ್ತಿರುವುದು ಆತಂಕದ ವಿಷಯ ಎಂದರು. ಮಣ್ಣಲ್ಲಿ ಮಣ್ಣಾಗದ, ನೀರಲ್ಲಿ ಕರಗದ, ಸುಟ್ಟರೆ ವಿಷಕಾರಿ ಅಂಶವನ್ನು ಗಾಳಿಗೆ ಸೇರಿಸುವ ಏಕ ಬಳಕೆ ಪ್ಲಾಸ್ಟಿಕ್ ಈ ಭೂಗ್ರಹಕ್ಕೆ ಮಾರಕವಾಗಿದ್ದು, ಪ್ರಜ್ಞಾವಂತ ನಾಗರಿಕರು, ಏಕ ಬಳಕೆ ಪ್ಲಾಸ್ಟಿಕ್ ಉತ್ಪನ್ನ ತ್ಯಜಿಸಬೇಕು. ಸಂತೆ, ಮಾರುಕಟ್ಟೆಗೆ ಬಟ್ಟೆಯ ಕೈಚೀಲ ತೆಗೆದುಕೊಂಡು ಹೋಗಬೇಕು ಎಂದು ಸಚಿವರು ಮನವಿ ಮಾಡಿದರು.

***************

ರಾಜ್ಯ ಸರಕಾರವು ಪೂರ್ವತಯಾರಿ ಇಲ್ಲದೇ ಆತುರಾತುರವಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸುತ್ತಿರುವುದು ಸರಿಯಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಟೀಕಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಗಣತಿದಾರರಾದ ಶಿಕ್ಷಕವೃಂದಕ್ಕೂ ಸಮಸ್ಯೆ ಆಗುತ್ತಿದೆ. ರಜೆ ದಿನಗಳನ್ನೂ ವಿಸ್ತರಿಸಿದ್ದರಿಂದ ವಿಶೇಷವಾಗಿ ಗ್ರಾಮೀಣ ಭಾಗದ ಮಕ್ಕಳಿಗೆ ಪಾಠ ಪ್ರವಚನಗಳಿಗೆ ತೊಂದರೆಯಾಗುತ್ತಿದೆ ಎಂದು ಆಕ್ಷೇಪಿಸಿದರು.

***************

ಕೃಷ್ಣಾ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಭೂಸ್ವಾಧೀನ ಪರಿಹಾರ ದರ ಜಾರಿಗೊಳಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಲಾಗಿದೆ ಎಂದು ಅಬಕಾರಿ ಸಚಿವ ಆರ್.ಬಿ ತಿಮ್ಮಾಪೂರ ಹೇಳಿದ್ದಾರೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-೩ ಮತ್ತು ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು ೫೧೯.೬ ಮೀಟರ್ ನಿಂದ ೫೨೪.೨೫೬ ಮೀಟರ್‌ಗೆ ಏರಿಸಲು ಅನುಮತಿ ನೀಡಲಾಗಿದೆ. ಜಲಾಶಯದ ಎತ್ತರವನ್ನು ಹೆಚ್ಚಿಸುವುದರಿಂದ ಆಲಮಟ್ಟಿಯ ಹಿನ್ನೀರಿನಿಂದ ಸುಮಾರು ೭೫ ಸಾವಿರ ಎಕರೆಗೂ ಹೆಚ್ಚು ಜಮೀನು ಮುಳುಗಡೆಯಾಗುವ ಸಂಭವವಿದೆ. ಭೂಸ್ವಾಧೀನ ಪ್ರಕ್ರಿಯೆಯನ್ನು ಒಂದೇ ಹಂತದಲ್ಲಿ ಪೂರ್ಣಗೊಳಿಸಲು, ಒಪ್ಪಿತ ಐತೀರ್ಪಿನ ಮೂಲಕ ಭೂಸ್ವಾಧೀನದ ದರವನ್ನು ಸೆಪ್ಟೆಂಬರ್ ೧೬ ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿತ್ತು ಎಂದು ತಿಳಿಸಿದ್ದಾರೆ.

***************

ದೇಶಾದ್ಯಂತ ೬೦ ದಿನಗಳ 'ತಂಬಾಕು ಮುಕ್ತ ಯುವ ಅಭಿಯಾನ ೩.೦' ಶುರುವಾಗಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಆಯುಷ್ಮಾನ್ ಮಂದಿರಗಳಲ್ಲಿ ತಂಬಾಕಿನ ದುಷ್ಪರಿಣಾಮಗಳ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಮತ್ತು ಟೋಫಿ ಮಾನದಂಡದ ಪ್ರಕಾರ ಅನೇಕ ಶಾಲೆಗಳನ್ನು ತಂಬಾಕು ಮುಕ್ತ ಶಾಲೆಗಳನ್ನಾಗಿ ಘೋಷಿಸುವುದು ಸೇರಿದಂತೆ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಈ ಕುರಿತು ತಂಬಾಕು ನಿಯಂತ್ರಣ ಅಧಿಕಾರಿಗಳಾದ ಡಾ. ಷಣ್ಮುಖ ನಾಯಕ್ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಡಾ. ಷಣ್ಮುಖ ನಾಯಕ್

****************

ಶೂನ್ಯದಿಂದ ಆರಂಭಗೊಂಡ ದೇಶದ ಐಟಿ ಉದ್ಯಮ ಇಂದು ೩೦೦ ಶತಕೋಟಿ ಡಾಲರ್‌ಗೆ ಏರಿಕೆಯಾಗಿದೆ ಎಂದು ಸಾಫ್ಟ್ ವೇರ್ ಟೆಕ್ನಾಲಜಿ ಪಾರ್ಕ್ ಆಫ್ ಇಂಡಿಯಾ ಎಸ್‌ಟಿಪಿಐ ನಿರ್ದೇಶಕ ಡಾ.ಸಂಜಯ್ ತ್ಯಾಗಿ ಹೇಳಿದ್ದಾರೆ. ದಾವಣಗೆರೆಯಲ್ಲಿಂದು ಭವಿಷ್ಯದ ಕಾರ್ಯಪಡೆಗೆ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಕುರಿತ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಧ್ವನಿ : ಡಾ.ಸಂಜಯ್ ತ್ಯಾಗಿ

****************

ಚಿಂತಾಮಣಿ ವಿಧಾನಸಭಾ ಕ್ಷೇತ್ರದಲ್ಲಿ ಮುಂದಿನ ದಿನಗಳಲ್ಲಿ ಹೆಚ್ಚು ಕೈಗಾರಿಕೆಗಳು ಬರುವುದರಿಂದ ಕ್ಷೇತ್ರದ ಎಲ್ಲಾ ರಸ್ತೆಗಳನ್ನು ಆದ್ಯತೆಯ ಮೇಲೆ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಸಿದ್ದೇಪಲ್ಲಿ ಕ್ರಾಸ್‌ನಲ್ಲಿ ೫ ಕೋಟಿ ರೂಪಾಯಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಯೂ ಸೇರಿದಂತೆ ಒಟ್ಟು ೮ ಕೋಟಿ ೯೪ ಲಕ್ಷ ರೂಪಾಯಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿ, ಚಿಂತಾಮಣಿ ಕ್ಷೇತ್ರದಲ್ಲಿ ಕಳೆದ ಎರಡು ವರ್ಷಗಳಲ್ಲಿ ಹತ್ತು ಹಲವು ಅಭಿವೃದ್ಧಿ ಯೋಜನೆಗಳಿಗೆ ಭೂಮಿಪೂಜೆ ನೆರವೇರಿಸಲಾಗಿದೆ ಎಂದರು.

****************

ಕೇಂದ್ರ ಸರ್ಕಾರದ ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದಿಂದ ಬೆಂಗಳೂರಿನ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ ಮೆಂಟ್ - ಐಐಎಂ ಆವರಣದಲ್ಲಿ 'ಎನ್‌ಎಸ್‌ಎಸ್ ಸಮೀಕ್ಷೆಗಳು ಸಾರ್ವಜನಿಕ ನೀತಿಯ ಮೇಲೆ ಹೇಗೆ ಪ್ರಭಾವ ಬೀರಿವೆ' ಎನ್ನುವ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ಆಯೋಜಿಸಲಾಗಿತ್ತು. ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಕಾರ್ಯದರ್ಶಿ ಡಾ. ಸೌರಭ್ ಗಾರ್ಗ್ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿ, ಜಿಲ್ಲಾ ಮಟ್ಟದಿಂದ ರಾಷ್ಟ್ರ ಮಟ್ಟದವರೆಗೆ ನಡೆದ ಎನ್‌ಎಸ್‌ಎಸ್ ಸಮೀಕ್ಷೆಯ ದತ್ತಾಂಶಗಳು ನೀತಿ-ನಿರೂಪಕರಿಗೆ ಸಹಾಯಕವಾಗಿವೆ. ಅಭಿವೃದ್ಧಿಗಾಗಿ ದತ್ತಾಂಶ ಎಂಬುದು ಸಚಿವಾಲಯದ ಧ್ಯೇಯವಾಗಿದೆ. ಈ ದತ್ತಾಂಶಗಳು ಸಂಶೋಧಕರಿಗೆ ದೇಶದ ನೀತಿ ರೂಪಿಸಲು ದೊಡ್ಡ ಪ್ರಮಾಣದಲ್ಲಿ ಸಹಾಯವಾಗಲಿದೆ ಎಂದು ಹೇಳಿದರು.

****************

ವಿದ್ಯಾರ್ಥಿಗಳು ಕ್ರೀಡಾಕೂಟದಲ್ಲಿ ಪ್ರಶಸ್ತಿ ಗಳಿಸುವುದು ಮುಖ್ಯವಲ್ಲ ಭಾಗವಹಿಸಿ ಸೋಲು ಗೆಲುವುಗಳನ್ನು ಸಮಾನವಾಗಿ ಸ್ವೀಕರಿಸಬೇಕು ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಮಧುಮಾಲತಿ ಪಡುವಣೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಕೋಲಾರ ನಗರದ ಮಿನಿ ಕ್ರೀಡಾಂಗಣದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಧ್ಯಾರ್ಥಿಗಳ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಕ್ರೀಡೆಯಲ್ಲಿ ಪ್ರತಿಯೊಬ್ಬರಿಗೂ ಗುರಿ ಮುಖ್ಯ ಎಂದರು.

******END******